144ನೇ ಅಧಿವೇಶನದಲ್ಲಿ ದಿ: 15/9/21 ರಂದು ಸದನದಲ್ಲಿ ಉತ್ತರಿಸಲಾಗಿದೆ
ನಿ-72, ಕ್ರ-92,

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಕೆ.ಸಿ. ಕೊಂಡಯ್ಯ ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಉತ್ತರ:**

**ಸೂಚನೆ:**

ಕರ್ನಾಟಕದಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಯ ಚುನಾವಣೆ ಎರಡು ವರ್ಷಗಳ ಹಿಂದೆ ನಡೆದಿರುತ್ತದೆ. ಅದೇ ರೀತಿ ಸುಮಾರು 15-16 ಪಟ್ಟಣ ಪಂಚಾಯಿತಿಗಳು, ನಗರಸಭೆಗಳ ಚುನಾವಣೆಗಳು ಸಹ ಜರುಗಿ ಕಳೆದ ಏಪ್ರಿಲ್-27 ಕ್ಕೆ ಈ ಚುನಾವಣಾ ಪ್ರಕ್ರಿಯೆಗಳೆಲ್ಲವೂ ಪೂರ್ಣಗೊಂಡಿರುತ್ತದೆ. ಆದಾಗ್ಯೂ, ಇಲ್ಲಿಯವರೆಗೆ ಅಧ್ಯಕ್ಷರು/ಉಪಾಧ್ಯಕ್ಷರು, ಮೇಯರ್/ ಉಪಮೇಯರ್ ಚುನಾವಣೆಗಳು ನಡೆದಿರುವುದಿಲ್ಲ. ಇದರಿಂದ ಆಯ್ಕೆಯಾದಂಥ ಸದಸ್ಯರು ತಮ್ಮ ತಮ್ಮ ವಾರ್ಡುಗಳಲ್ಲಿ ಕೆಲಸ ಮಾಡುವುದಕ್ಕೆ ಅನುಕೂಲ ಮಾಡಿಕೊಟ್ಟಿಲ್ಲ. ಆದಕಾರಣ, ಮೇಯರ್/ಉಪಮೇಯರ್ ಮತ್ತು ಅಧ್ಯಕ್ಷ/ಉಪಾಧ್ಯಕ್ಷರ ಚುನಾವಣೆಗಳನ್ನು ನಡೆಸಬೇಕೆಂಬ ವಿಷಯದ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯ ಬಯಸುತ್ತೇನೆ

**ಉತ್ತರ**

ದಿನಾಂಕ:15/07/2021 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯ ತೆಗೆದುಕೊಳ್ಳಲಾಗಿದೆ:

> "ಪ್ರಸ್ತುತ ಕೋವಿಡ್ ಪರಿಸ್ಥಿತಿ ಬಗ್ಗೆ ಚರ್ಚಿಸಿದ ಸಚಿವ ಸಂಪುಟವು ಗ್ರಾಮೀಣ ಸ್ಥಳೀಯ ಸಂಸ್ಥೆಗಳ (GP, TP and ZPs) ಮತ್ತು ನಗರ ಸ್ಥಳೀಯ ಸಂಸ್ಥೆಗಳ (Town Panchayaths, TMCs, CMCs, Corporations), ಸಹಕಾರ ಸಂಘಗಳು, ನೊಂದಾಯಿತ ಸೊಸೈಟಿಗಳು / ಸಂಘ-ಸಂಸ್ಥೆಗಳ ಸಾರ್ವತ್ರಿಕ ಚುನಾವಣೆಗಳನ್ನು / ಉಪ ಚುನಾವಣೆಗಳನ್ನು 2021 ರ ಡಿಸೆಂಬರ್ ಅಂತ್ಯದವರೆಗೆ ನಡೆಸುವುದು ಸೂಕ್ತವಲ್ಲವೆಂದು ನಿರ್ಧರಿಸಿ, ಅದರಂತೆ ಸಂಬಂಧಿಸಿದ ಚುನಾವಣಾ ಪ್ರಾಧಿಕಾರಗಳನ್ನು ಕೋರಲು ಸಚಿವ ಸಂಪುಟವು ನಿರ್ಧರಿಸಿತು"

ಅದರಂತೆ, ನಗರಾಭಿವೃದ್ಧಿ ಇಲಾಖೆಯಿಂದ ಸಂಬಂಧಪಟ್ಟ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಾಗೂ ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆದು, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳು ಹಾಗೂ ಮಹಾನಗರ ಪಾಲಿಕೆಗಳು) ಸಾರ್ವತ್ರಿಕ ಚುನಾವಣೆ / ಉಪ ಚುನಾವಣೆ ಹಾಗೂ ಸದರಿ ಸಂಸ್ಥೆಗಳ ಅಧ್ಯಕ್ಷರು – ಉಪಾಧ್ಯಕ್ಷರ ಚುನಾವಣೆಗಳನ್ನು ಮುಂದಿನ 6 ತಿಂಗಳ ಅವಧಿಗೆ ಮುಂದೂಡುವ ಬಗ್ಗೆ ಸಚಿವ ಸಂಪುಟವು ತೀರ್ಮಾನಿಸಿದ್ದು, ಅದರಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.

ಬಳ್ಳಾರಿ ಮಹಾನಗರ ಪಾಲಿಕೆಯೂ ಸೇರಿದಂತೆ, ರಾಜ್ಯದಲ್ಲಿ ಪ್ರಸ್ತುತ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬಾಕಿ ಇರುವ ಸಾರ್ವತ್ರಿಕ ಚುನಾವಣೆ, ಮೇಯರ್ ಹಾಗೂ ಉಪಮೇಯರ್, ಅಧ್ಯಕ್ಷ/ಉಪಾಧ್ಯಕ್ಷ ಚುನಾವಣೆಗಳನ್ನು 06 ತಿಂಗಳ ಅವಧಿಗೆ ಮುಂದೂಡಿರುವುದರಿಂದ ಅಂತಹ ನಗರ ಸ್ಥಳೀಯ ಸಂಸ್ಥೆಗಳ ಆಡಳಿತಾತ್ಮಕ ಹಿತದೃಷ್ಟಿಯಿಂದ ಸರ್ಕಾರವು ಮುಂದಿನ ಆದೇಶದವರೆಗೆ ಆಡಳಿತಾಧಿಕಾರಿಗಳನ್ನು ನೇಮಿಸಿ ಆದೇಶಿಸಿರುತ್ತದೆ. ಇದರಿಂದ ಸ್ಥಳೀಯ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸುವುದೂ ಸೇರಿದಂತೆ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಕ್ತ ಕ್ರಮವಹಿಸಲಾಗಿರುತ್ತದೆ.

.....2...

ಪ್ರಸ್ತುತ, ರಾಜ್ಯದಲ್ಲಿ ಕೋವಿಡ್–19 ಪರಿಸ್ಥಿತಿಯು ಸುಧಾರಿಸುತ್ತಿರುವ ಹಿನ್ನೆಲೆಯಲ್ಲಿ ಸ್ಥಳೀಯ ಸಂಸ್ಥೆಗಳ ಹಿತದೃಷ್ಟಿಯಿಂದ ಸರ್ಕಾರವು ವಿಷಯವನ್ನು ಪರಿಶೀಲಿಸುತ್ತಿದ್ದು, ಶೀಘ್ರದಲ್ಲಿಯೇ ಎಲ್ಲಾ ಸ್ಥಳೀಯ ಸಂಸ್ಥೆಗಳ ಮೇಯರ್ ಹಾಗೂ ಉಪಮೇಯರ್, ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನಗಳ ಚುನಾವಣೆಗಳನ್ನು ನಡೆಸಲು ಸೂಕ್ತ ಕ್ರಮ ವಹಿಸಲಾಗುವುದು.

ಸಂಖ್ಯೆ:ನಅಇ 30 ಎಲ್ ಸಿಕ್ಯೂ 2021

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು